ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 75(36) |
| ಸದಸ್ಯರ ಹೆಸರು | : ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : 15.07.2024 |
| ಉತ್ತರಿಸುವ ಸಚಿವರು | : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದ ಖಾಸಗಿ ಅನುದಾನಿತ ಶಾಲೆಗಳಲ್ಲಿ ಎಷ್ಟು ವರ್ಷದಿಂದ ಬೋಧಕರ ಹುದ್ದೆಗಳು ಖಾಲಿ ಇವೆ; ಅವುಗಳ ಒಟ್ಟು ಸಂಖ್ಯೆ ಎಷ್ಟು; | ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ದಿನಾಂಕ:01.01.2016 ರಿಂದ ಬೋಧಕ ಹುದ್ದೆಗಳು ಖಾಲಿ ಇರುತ್ತವೆ.<br>ರಾಜ್ಯದ ಅನುದಾನಿತ ಪ್ರೌಢಶಾಲೆಗಳಲ್ಲಿ ದಿನಾಂಕ:01.01.2016 ರಿಂದ 31.08.2023ರವರೆಗೆ ಖಾಲಿ ಇರುವ ಒಟ್ಟು ಬೋಧಕ ಹುದ್ದೆಗಳ ಸಂಖ್ಯೆ:7739. |
| ಆ | ಸರ್ಕಾರಕ್ಕೆ ಖಾಲಿ ಇರುವ ಬೋಧಕರ ಹುದ್ದೆಗಳನ್ನು ಭರ್ತಿ ಮಾಡಲು ಶಿಕ್ಷಣ ಸಂಸ್ಥೆಗಳು ಎಷ್ಟು ವರ್ಷಗಳಿಂದ ಮನವಿ ಸಲ್ಲಿಸುತ್ತಾ ಬಂದಿವೆ; | ರಾಜ್ಯದ ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ದಿನಾಂಕ:01.01.2016 ರಿಂದ ಖಾಲಿ ಇರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಶಿಕ್ಷಣ ಸಂಸ್ಥೆಗಳಿಂದ ಮನವಿ ಸಲ್ಲಿಕೆಯಾಗುತ್ತಿವೆ. |
| ಇ | ಶಿಕ್ಷಣ ಸಂಸ್ಥೆಗಳ ಮನವಿಗೆ ಇದುವರೆಗೂ ಒಪ್ಪಿಗೆ ನೀಡದೇ ಇರಲು ಕಾರಣಗಳೇನು; ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲು ಸರ್ಕಾರ ಅನುಮತಿ ನೀಡುವುದು? | ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ದಿನಾಂಕ:01.01.2016 ರಿಂದ 31.12.2020ರವರೆಗೆ ನಿವೃತ್ತಿ, ನಿಧನ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ತೆರವಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ. |

ಇಪಿ 198 ಎಸ್‌ಇಎಸ್ 2024

(ಎಸ್ ಮಧುಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ
ಇಲಾಖಾ ಸಚಿವರು